**All India Radio: Bangalore**
**Regional Bulletin In Kannada**
**19.03.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**19.03.2025 / 2.30 p.m.**

*****************

**ಮುಖ್ಯಾಂಶಗಳು**

- **ಗೋಮಾಳ, ಕೆರೆ ಜಾಗ ಒತ್ತುವರಿ ಮಾಡಿಕೊಂಡರೆ ಕಠಿಣ ಕ್ರಮ – ವಿಧಾನಪರಿಷತ್ತಿನಲ್ಲಿ ಕೃಷ್ಣಭೈರೇಗೌಡ ಸ್ಪಷ್ಟನೆ**
- **ಮೆಣಸಿನಕಾಯಿ ಬೆಲೆ ಕುಸಿತ; ರಾಜ್ಯ ಸರ್ಕಾರ ಮಧ್ಯಪ್ರವೇಶಿಸುವಂತೆ ವಿಧಾನಸಭೆಯಲ್ಲಿ ಪಕ್ಷಬೇಧ ಮರೆತು ಸದಸ್ಯರ ಆಗ್ರಹ**
- **ಕೃಷಿ ಸಾಲಗಳ ನಿಯಮಾವಳಿ ಸರಳೀಕರಣಗೊಳಿಸುವಂತೆ ವಿಧಾನಸಭೆಯಲ್ಲಿ ಶಾಸಕ ದರ್ಶನ್ ಪುಟ್ಟಣಯ್ಯ ಮನವಿ**
- **ಅಲ್ಪಸಂಖ್ಯಾತ ಗುತ್ತಿಗೆದಾರರ ಮೀಸಲಾತಿ ಮಸೂದೆ ತಿರಸ್ಕರಿಸುವಂತೆ ರಾಜ್ಯಪಾಲರಿಗೆ ಬಿಜೆಪಿ ಪತ್ರ**

*****************

ಗೋಮಾಳ, ಕೆರೆ ಜಾಗ ಸೇರಿದಂತೆ ಒತ್ತುವರಿ ಮಾಡಿಕೊಂಡಿರುವ ಸರ್ಕಾರಿ ಜಮೀನನ್ನು ತೆರವುಗೊಳಿಸಲು ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಧಾನಪರಿಷತ್‌ನಲ್ಲಿ ತಿಳಿಸಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಜೆಡಿಎಸ್ ಸದಸ್ಯ ಟಿ. ಎ.ಶರವಣ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಸರ್ಕಾರಿ ಜಮೀನನ್ನು ಎಲ್ಲೆಲ್ಲಿ ಒತ್ತುವರಿ ಮಾಡಲಾಗಿದೆ ಎಂಬುದನ್ನು ಗುರುತಿಸಿ ತೆರವುಗೊಳಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

ಸರ್ಕಾರಿ ಜಮೀನು ಒತ್ತುವರಿ ತೆರವು ಗೊಳಿಸುವ ಸಂಬಂಧ ಪ್ರತಿ ತಾಲ್ಲೂಕಿನಲ್ಲಿ ವಾರಕ್ಕೆ ಎರಡು ಬಾರಿ ಕಾರ್ಯಾಚರಣೆ ನಡೆಸಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಸರಕಾರಿ ಜಮೀನಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಬೇರೆಯವರಿಗೆ ಮಾರಾಟ ಮಾಡಲು ಅವಕಾಶವಿಲ್ಲದಂತೆ ಕಾನೂನು ಜಾರಿಗೊಳಿಸಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

*****************

ರಾಜ್ಯದ ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ 34 ಸಾವಿರ ದೇವಾಲಯಗಳಿದ್ದು, ಅವುಗಳಿಗೆ ಸೇರಿದ ಜಮೀನನ್ನು ಪಹಣಿ ಮಾಡಿಕೊಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಮುಜರಾಯಿ ಹಾಗೂ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ವಿಧಾನಪರಿಷತ್‌ನಲ್ಲಿಂದು ಸ್ಪಷ್ಟಪಡಿಸಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯರು ಮುಜರಾಯಿ ದೇವಾಲಯಗಳ ಬಗ್ಗೆ ಕೇಳಿದ ಪ್ರಶ್ನೆಗಳಿಗೆ ಉತ್ತರ ನೀಡಿದ ಸಚಿವರು, ಇದುವರೆಗೆ ವಿವಿಧ ದೇವಾಲಯಗಳಿಗೆ ಸೇರಿದ ಜಮೀನು ಒತ್ತುವರಿಗೆ ಸಂಬಂಧಿಸಿದಂತೆ 15 ಸಾವಿರ ಎಕರೆ ಭೂಮಿಯನ್ನು ತೆರವುಗೊಳಿಸಿ ದೇವಾಲಯಗಳ ಹೆಸರಿಗೆ ಪಹಣಿ ಮಾಡಲಾಗಿದೆ.

ಚಿಕ್ಕಮಗಳೂರಿನ ಜಾಗರ ಹೋಬಳಿ ಇನಾಂ ದತ್ತಾತ್ರೇಯ ಗ್ರಾಮದ ಜಮೀನು ಒತ್ತುವರಿ ಸಂಬಂಧ ಉನ್ನತ ಅಧಿಕಾರಿಗಳಿಂದ ತನಿಖೆ ನಡೆಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

******************

ರಾಜ್ಯದಲ್ಲಿ ಮೆಣಸಿನಕಾಯಿ ಬೆಲೆ ಕುಸಿತವಾಗಿದ್ದು ರಾಜ್ಯಸರ್ಕಾರ ಕೂಡಲೇ ಆಂಧ್ರ ಪ್ರದೇಶದ ಮಾದರಿಯಲ್ಲಿ ಮಧ್ಯಪ್ರವೇಶಿಸಬೇಕೆಂದು ಶಾಸಕರು ವಿಧಾನಸಭೆಯಲ್ಲಿಂದು ಪಕ್ಷಬೇಧ ಮರೆತು ಆಗ್ರಹಿಸಿದ್ದಾರೆ.

ಆಡಳಿತ ಪಕ್ಷದ ಶಾಸಕ ಜೆ.ಎನ್.ಗಣೇಶ್ ವಿಷಯ ಪ್ರಸ್ತಾಪಿಸುತ್ತ, ಮೆಣಸಿನಕಾಯಿ ಬೆಲೆ 2022ರಲ್ಲಿ ಪ್ರತಿ ಕ್ವಿಂಟಾಲ್‌ಗೆ 40 ಸಾವಿರ ರೂಪಾಯಿಗಳಿತ್ತು. ಈಗ ಅದು ಏಳೆಂಟು ಸಾವಿರ ರೂಪಾಯಿಗೆ ಕುಸಿತವಾಗಿದೆ. ರಾಜ್ಯ ಸರ್ಕಾರ ಈ ಬಗ್ಗೆ ಗಮನ ಹರಿಸಬೇಕು. ಇಲ್ಲವಾದರೆ ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತವೆ ಎಂದು ಆತಂಕ ವ್ಯಕ್ತಪಡಿಸಿದರು.

ಆಂಧ್ರಪ್ರದೇಶದಲ್ಲಿ ಪ್ರತಿ ಕ್ವಿಂಟಾಲ್‌ಗೆ 11ಸಾವಿರದ 880 ರೂಪಾಯಿಗಳನ್ನು ನಿಗದಿ ಮಾಡಲಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ಅವರಿಗೆ ಮುಖ್ಯಮಂತ್ರಿ ಪತ್ರ ಬರೆದಿದ್ದಾರೆ. ಆದರೆ ಕೇಂದ್ರದಿಂದ ಈವರೆಗೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ರಾಜ್ಯದ ಸಂಸದರು ಈ ಬಗ್ಗೆ ಗಮನ ಹರಿಸಬೇಕೆಂದು ಮನವಿ ಮಾಡಿದ್ದಾರೆ.

ಬಳ್ಳಾರಿಯಲ್ಲಿ ಮೆಣಸಿನಕಾಯಿ ಮಾರುಕಟ್ಟೆ ಸ್ಥಾಪನೆ ಮಾಡುವುದಾಗಿ ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿತ್ತು. ಆದರೆ ಈವರೆಗೂ ಈ ನಿಟ್ಟಿನಲ್ಲಿ ಯಾವುದೇ ಪ್ರಕ್ರಿಯೆಗಳು ಆರಂಭವಾಗಿಲ್ಲ. ಕೂಡಲೇ ರಾಜ್ಯಸರ್ಕಾರ ಮಾರುಕಟ್ಟೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಸದಸ್ಯ ಜನಾರ್ಧನರೆಡ್ಡಿ ಮಾತನಾಡಿ, ಮೆಣಸಿನಕಾಯಿ ಬೆಲೆ ಕುಸಿತದ ಬಗ್ಗೆ ಆತಂಕ ವ್ಯಕ್ತಪಡಿಸಿದರು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಮೆಣಸಿನಕಾಯಿಯೇ ಪ್ರಮುಖ ಬೆಳೆ. ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು ರೈತರಿಗೆ ನೆರವು ಕೊಡಿಸಬೇಕು ಎಂದು ಆಗ್ರಹಿಸಿದರು.

ಬೆಂಗಳೂರಿಗೆ ಹೆಚ್ಚು ಅನುದಾನ ನೀಡಲಾಗುತ್ತಿದ್ದು, ಅದರಲ್ಲಿ ಶೇಕಡ 10 ರಷ್ಟನ್ನು ಕಲ್ಯಾಣ ಕರ್ನಾಟಕ ಭಾಗಕ್ಕೆ ನೀಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

*****************

ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಆಯವ್ಯಯದ ಮೇಲೆ ವಿಧಾನಸಭೆಯಲ್ಲಿಂದು ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಶಾಸಕ ದರ್ಶನ್ ಪುಟ್ಟಣ್ಣಯ್ಯ, ರಾಜ್ಯದಲ್ಲಿ ರೈತರ ಆತ್ಮಹತ್ಯೆಗಳು ಹೆಚ್ಚಾಗುತ್ತಿದ್ದು, ಇದಕ್ಕೆ ಶಾಶ್ವತ ಪರಿಹಾರ ಕಂಡುಹಿಡಿಯಬೇಕಿದೆ ಎಂದು ತಿಳಿಸಿದರು.

ಕೃಷಿ ಸಾಲಗಳ ನಿಯಮಾವಳಿಗಳನ್ನು ಸರಳೀಕರಣಗೊಳಿಸಬೇಕು. ನೀರಾವರಿ ವಲಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ವಿದ್ಯುತ್ ವಲಯವನ್ನು ಖಾಸಗೀಕರಣ ಮಾಡುವ ಪ್ರಸ್ತಾವವನ್ನು ಕೈಬಿಡಬೇಕು. ಈ ಹಿಂದೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿರುವ ಮೂರು ಕೃಷಿ ಕಾನೂನುಗಳನ್ನು ರದ್ದುಗೊಳಿಸಬೇಕು. ರಾಷ್ಟ್ರೀಯ ಕೃಷಿ ನೀತಿ ಅವೈಜ್ಞಾನಿಕವಾಗಿದ್ದು ಅದನ್ನು ಒಪ್ಪಬಾರದು ಎಂದು ಸದನದಲ್ಲಿ ಮನವಿ ಮಾಡಿದರು.

ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡುವುದರ ಜೊತೆಗೆ, ವೈದ್ಯರ ಹುದ್ದೆಗಳು ಖಾಲಿ ಇದ್ದು ಅವುಗಳ ಭರ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಸದನದ ಗಮನಕ್ಕೆ ತಂದರು.

ರಾಗಿ, ಜೋಳ ಸೇರಿದಂತೆ ಕೃಷಿ ಉತ್ಪನ್ನಗಳ ಬೆಲೆ ಕುಸಿತವಾದಾಗ ಮಾರುಕಟ್ಟೆ ಪ್ರವೇಶಿಸಿ ಖರೀದಿ ಮಾಡಲು ವರ್ಷ ಪೂರ್ತಿ ಖರೀದಿ ಕೇಂದ್ರಗಳನ್ನು ತೆರೆದಿಡಬೇಕು ಎಂದು ಆಗ್ರಹಿಸಿದರು.

ಸಾವಯವ ಕೃಷಿಗೆ ಹೆಚ್ಚಿನ ಒತ್ತು ನೀಡುವುದರ ಜೊತೆಗೆ ಹೋಬಳಿಗೊಂದು ಸಹಜ ಕೃಷಿ ಕೇಂದ್ರ ಸ್ಥಾಪನೆಗೆ ಅನುದಾನ ಒದಗಿಸಬೇಕು. ಉತ್ತರಾಖಂಡ್‌ನಲ್ಲಿ ಒಂದು ಲಕ್ಷ ರೈತರನ್ನು ಸಹಜ ಕೃಷಿ ವ್ಯಾಪ್ತಿಗೆ ತರುವ ಪ್ರಯತ್ನಗಳು ನಡೆಯುತ್ತಿವೆ. ರಾಜ್ಯದಲ್ಲೂ ಅಂತಹ ಪ್ರಯತ್ನಗಳಾಗಬೇಕೆಂದು ಮನವಿ ಮಾಡಿದರು.

ಸದಸ್ಯ ಬಸವರಾಜ ಮತ್ತಿಮೋಡ್ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿ, ರಾಜ್ಯದಲ್ಲಿ ತೊಗರಿ ಬೆಲೆ ಕುಸಿತಗೊಂಡಿದೆ. ರೈತರು ಸಂಕಷ್ಟಕ್ಕೀಡಾಗಿದ್ದು ಕೂಡಲೇ ರಾಜ್ಯಸರ್ಕಾರ 800 ಕೋಟಿ ರೂಪಾಯಿಗಳ ಅನುದಾನ ಬಿಡುಗಡೆ ಮಾಡಿ. ಪ್ರತಿ ಕ್ವಿಂಟಾಲ್ ತೊಗರಿಯನ್ನು 10 ಸಾವಿರ ರೂಪಾಯಿಗಳಿಗೆ ಖರೀದಿ ಮಾಡಲು ಆರಂಭಿಸಬೇಕು ಎಂದು ಆಗ್ರಹಿಸಿದರು.

371 ಜೆ ವಿಶೇಷ ಸ್ಥಾನಮಾನದಿಂದಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ನೇಮಕಾತಿಗಳಿಗೆ ವಿಶೇಷ ಆದ್ಯತೆ ಇದೆ. ಕಲ್ಯಾಣ ಕರ್ನಾಟಕ ಸಾರಿಗೆಯಲ್ಲಿ ಸಾಕಷ್ಟು ಹುದ್ದೆಗಳು ಖಾಲಿ ಇದ್ದು ಅವುಗಳನ್ನು ಶೀಘ್ರ ಭರ್ತಿ ಮಾಡಬೇಕೆಂದು ಒತ್ತಾಯಿಸಿದರು.

*****************

ವಿವಾದಾತ್ಮಕ ಮುಸ್ಲಿಂ ಗುತ್ತಿಗೆದಾರರಿಗೆ ಮೀಸಲಾತಿ ಮಸೂದೆಯನ್ನು ತಿರಸ್ಕರಿಸುವಂತೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಬಿಜೆಪಿ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪತ್ರ ಬರೆದಿದ್ದಾರೆ. ಪತ್ರದಲ್ಲಿ ಈ ಮಸೂದೆ ಸಂವಿಧಾನ ತತ್ವಗಳಿಗೆ ವಿರುದ್ಧವಾಗಿದೆ ಎಂದು ತಿಳಿಸಿದ್ದಾರೆ.

ಸಂವಿಧಾನ ರಚನಾ ಸಮಯದಲ್ಲಿ ಡಾ.ಅಂಬೇಡ್ಕರ್ ಅವರೇ ಧರ್ಮಾಧಾರಿತ ಮೀಸಲಾತಿಯನ್ನು ವಿರೋಧಿಸಿದ್ದರು. ವಿವಿಧ ರಾಜ್ಯಗಳಲ್ಲೂ ಧರ್ಮಾಧಾರಿತ ಮೀಸಲಾತಿಯನ್ನು ನ್ಯಾಯಾಲಯಗಳು ತಿರಸ್ಕರಿಸಿವೆ. ಇದರ ಹೊರತಾಗಿಯೂ ಕಾಂಗ್ರೆಸ್ ಸರ್ಕಾರ ಮುಸ್ಲಿಂ ಸಮುದಾಯಕ್ಕೆ ಶೇಕಡ 4 ರಷ್ಟು ಮೀಸಲಾತಿ ನೀಡುವ ಮೂಲಕ ಮತ ಬ್ಯಾಂಕ್ ರಾಜಕೀಯದಲ್ಲಿ ತೊಡಗಿದೆ ಎಂದು ಪತ್ರದಲ್ಲಿ ಆರೋಪಿಸಿದ್ದಾರೆ.

ಇದೇ ವೇಳೆ, ಅಲ್ಪಸಂಖ್ಯಾತರಿಗೆ ಮೀಸಲಾತಿ ನೀಡುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವಿವೇಕದ ಸರ್ಕಾರ ನಡೆಸುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಲ್ಪಸಂಖ್ಯಾತ ಮೀಸಲಾತಿ ಮಸೂದೆಯನ್ನು ವಿರೋಧಿಸಿದ್ದಾರೆ.

*****************

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಗೋಕುಲ ವಿದ್ಯಾಸಂಸ್ಥೆಯಲ್ಲಿ ವಿಷಹಾರ ಸೇವನೆಯಿಂದ ಅಸ್ವಸ್ಥಗೊಂಡ ಮಕ್ಕಳು ಪಡೆಯುತ್ತಿರುವ ಮೇಘಾಲಯದ 22 ವಿದ್ಯಾರ್ಥಿಗಳು ಹಾಗೂ ಸ್ಥಳೀಯ 14 ವಿದ್ಯಾರ್ಥಿಗಳು ಗುಣಮುಖರಾದ ಬಳಿಕ ಶೈಕ್ಷಣಿಕ ವರ್ಷದ ಪರೀಕ್ಷೆ ಬರೆಯಲು ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಸೂಚಿಸಿದ್ದಾರೆ.

ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಮಕ್ಕಳು ಗುಣಮುಖರಾದ ನಂತರ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಹಸ್ತಾಂತರ ಮಾಡಲಾಗುವುದು. ಬಾಲಮಂದಿರದಲ್ಲಿ ಅವರಿಗೆ ವಾಸ್ತವ್ಯ ಹಾಗೂ ವೈದ್ಯರ ಸಲಹೆಯಂತೆ ಆಹಾರ ಒದಗಿಸಲಾಗುವುದು ಎಂದು ತಿಳಿಸಿದ್ದಾರೆ.

ಸರ್ಕಾರದ ಆಧೀನದಲ್ಲಿ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಯಾವುದೇ ಕಾರಣಕ್ಕೂ ಹೊರಗಿನ ವ್ಯಕ್ತಿ ಹಾಗೂ ಸಂಸ್ಥೆಯಿಂದ ಆಹಾರ ಪಡೆಯುವಂತಿಲ್ಲ. ಯಾವುದಾದರೂ ದೂರು ಬಂದಲ್ಲಿ ಕ್ರಮ ವಹಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

*****************

ರಾಜ್ಯದಲ್ಲಿ ಇದೇ 21 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯಲಿದ್ದು, ಏಪ್ರಿಲ್ 4ಕ್ಕೆ ಅಂತ್ಯಗೊಳ್ಳಲಿದೆ. ಶುಕ್ರವಾರ ಪ್ರಥಮ ಭಾಷೆ ಕನ್ನಡ, ಸಂಸ್ಕೃತ, ಹಿಂದಿ ಮತ್ತು ಉರ್ದು ಪರೀಕ್ಷೆ ನಡೆಯಲಿದೆ.

ಬೆಳಗ್ಗೆ 10 ರಿಂದ ಮಧ್ಯಾಹ್ನ 1.15ರವರೆಗೆ ಪರೀಕ್ಷೆ ನಡೆಯಲಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಗಾಗಿ ಜಿಲ್ಲಾಡಳಿತ ಸಕಲ ಸಿದ್ಧತೆ ನಡೆಸಿದ್ದು, ಪರೀಕ್ಷೆ ನಡೆಯುವ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿವೆ.

**ಧಾರವಾಡ** ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶ ಹೆಚ್ಚಿಸುವ ನಿಟ್ಟಿನಲ್ಲಿ ಮಿಷನ್ ವಿದ್ಯಾ ಕಾಶಿಯಡಿಯಲ್ಲಿ, ಮಕ್ಕಳಿಗೆ ಪ್ರತ್ಯೇಕ ತರಗತಿಗಳು, ರೂಢಿ ಪರೀಕ್ಷೆಗಳು, ಕಾರ್ಯಗಾರಗಳನ್ನು ಪ್ರತಿನಿತ್ಯ ನಡೆಸಲಾಗಿದ್ದು, ಕಾರ್ಯಕ್ರಮ ಯಶಸ್ವಿಯಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

*****************

ರಾಜ್ಯದಲ್ಲಿ ಇಂದು ಕೂಡ ಒಣಹವೆ ಹೆಚ್ಚಾಗುವ ಸಾಧ್ಯತೆ ಇದೆ.

ಇಂದು ಕಲಬುರಗಿಯಲ್ಲಿ ಅತಿ ಹೆಚ್ಚು ಉಷ್ಣಾಂಶ 40.6 ಡಿಗ್ರಿ ದಾಖಲಾಗಿದೆ. ಚಾಮರಾಜನಗರದಲ್ಲಿ ಅತಿ ಕಡಿಮೆ 20.1 ಡಿಗ್ರಿ ದಾಖಲಾಗಿದೆ. ಬೆಂಗಳೂರಿನಲ್ಲಿ 35 ಡಿಗ್ರಿ ಉಷ್ಣಾಂಶ ಕಂಡು ಬಂದಿದೆ.

ಬೆಂಗಳೂರಿನಲ್ಲಿ ಸಂಜೆ ವೇಳೆಗೆ ಮೋಡಕವಿದ ವಾತಾವರಣ ಇರಲಿದೆ.

**********ಮುಕ್ತಾಯ********